ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಅಸಂಘಟಿತ ಕಟ್ಟಡ ಕಾರ್ಮಿಕರು ಹಾಗೂ ಇತರ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-

62 (121) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕದ ಅಸಂಘಟಿತ ಕಟ್ಟಡ ಕಾರ್ಮಿಕರು ಹಾಗೂ ಇತರೆ ನಿರ್ಮಾಣದ ಕಾರ್ಮಿಕ ಕ್ಷೇಮಾಭಿವೃದ್ಧಿಗೆ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ; (ವಿವರ ನೀಡುವುದು)

(ಆ) ಕರ್ನಾಟಕ ರಾಜ್ಯ ಕಾರ್ಮಿಕ ಅಧ್ಯಯನ ಸಂಸ್ಥೆಯಿಂದ ಕಾರ್ಮಿಕರ ಕ್ಷೇಮಾಭಿವೃದ್ಧಿ ಕುರಿತಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಹಾಗಿದ್ದಲ್ಲಿ, ಪ್ರಸ್ತಾವನೆ ಯಾವ ಹಂತದಲ್ಲಿದೆ;

(ಇ) ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿಗೆ ಸಂಗ್ರಹವಾದ ಹಣವೆಷ್ಟು; ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಪ್ರಸಕ್ತ ಸಾಲಿನಲ್ಲಿ ಖರ್ಚಾದ ಮೊತ್ತವೆಷ್ಟು; (ಫಲಾನುಭವಿಗಳ ಸಹಿತ ಮಾಹಿತಿ ನೀಡುವುದು)

(ಈ) ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ? (ಈ ಕ್ಷೇತ್ರ ಇಲಾಖೆಗಳ ಕಾರ್ಯನಿರ್ವಹಣೆ ಕುರಿತಾಗಿ ಸಮಗ್ರ ಮಾಹಿತಿ ನೀಡುವುದು)